# ಕರ್ನಾಟಕ ಸರ್ಕಾರ
# ಸಾರಿಗೆ ಇಲಾಖೆ
# ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ
# ಚಿಕ್ಕಬಳ್ಳಾಪುರ.

***ಕೇಂದ್ರ ಮಾಹಿತಿ ಹಕ್ಕು ಕಾಯ್ದೆ 2005 4(1) ಎ & 4(1) (ಬಿ) ರಡಿಯಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು, ಚಿಕ್ಕಬಳ್ಳಾಪುರ ರವರು ಹೊರಡಿಸಿದ ಕೈಪಿಡಿ.***

ಪ್ರಾದೇಶಿಕ ಸಾರಿಗೆ ಅಧಿಕಾರಿಗಳ ಕಛೇರಿ. ಚಿಕ್ಕಬಳ್ಳಾಪುರ ಕೇಂದ ಮಾಹಿತಿ ಹಕ್ಕು ಕಾಯ್ದೆ 2005 4(1) ಎ & 4(1) (ಬಿ) ರಡಿಯಲ್ಲಿ ಪ್ರಾದೇಶಿಕ ಸಾರಿಗೆ ಅಧಿಕಾರಿಗಳು ಚಿಕ್ಕಬಳ್ಳಾಪುರ
ರವರು ಹೊರಡಿಸಿದ ಕೈಪಿಡಿ.

4(1) ಎ

ಈ ಕೆಳಕಂಡ ಮಾಹಿತಿಗಳನ್ನು ಸಾರ್ವಜನಿಕ ಮಾಹಿತಿಗಾಗಿ ಚಿಕ್ಕಬಳ್ಳಾಪುರ ಜಿಲ್ಲಾ ವೆಬ್ ಸೈಟ್ ವಿಳಾಸ http://rtochickballapur.nic.in ಅಳವಡಿಸುವ ಪ್ರಕ್ರಿಯೆ ಜಾರಿಯಲ್ಲಿದೆ. ಸೆಕ್ಷನ್ 4(1) ಎ ಪ್ರಕಾರ ಕಛೇರಿಗೆ ಸಂಬಂಧಿಸಿದ ಸಂಪೂರ್ಣ ಕಡತಗಳ ಮಾಹಿತಿಯನ್ನು ಸಾರ್ವಜನಿಕರಿಗೆ ಒದಗಿಸುವ ಕುರಿತು ಕಛೇರಿಗೆ ಸಂಭಂಧಿಸಿದಂತೆ ಎಲ್ಲಾ ನೊಂದಾಯಿತ ವಾಹನಗಳ ದಾಖಲೆಗಳನ್ನು ಶ್ರೇಣಿಗಳಿಗೆ ಅನುಗುಣವಾಗಿ ಕ್ರಮಬದ್ಧವಾಗಿ ವಿಂಗಡಿಸಿ ಕಟ್ಟುಗಳಾಗಿ ಜೋಡಣೆ ಮಾಡಿ ಬಿಳಿ ಕೋರ ಬಟ್ಟೆಯಲ್ಲಿ ನಿರ್ವಹಿಸಿ ಸುಸಜ್ಜಿತವಾದ ಅಭಿಲೇಖಾಲಯದಲ್ಲಿ ಸಂರಕ್ಷಿಸಿಡಲಾಗಿದೆ. ಹಾಗೆ ಈ ದಾಖಲೆಗಳ ಬಗ್ಗೆ ನಿಖರವಾದ ಮಾಹಿತಿಗಾಗಿ ವಿವರಗಳನ್ನು ಇಂಡೆಕ್ಸ್ ರೀತಿಯಲ್ಲಿ ತಯಾರಿಸಿ ಸುಸಜ್ಜಿತಗೊಳಿಸಲಾಗಿದೆ.ಹಾಗೆ ಕಛೇರಿಗೆ ಸಂಬಂಧಿಸಿದ ಹಾಗೂ ಸಿಬ್ಬಂದಿ ವಿಭಾಗಕ್ಕೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಗುರುತಿಸಿ ಕ್ರಮ ಬದ್ದವಾಗಿ ಜೋಡಿಸಿಡಲಾಗಿದೆ. ಅಕ್ಟೋಬರ್ 2009 ರಿಂದ ಕಛೇರಿಯನ್ನು ಸಂಪೂರ್ಣ ಗಣಕೀಕರಣಗೊಳಿಸಲಾಗಿದ್ದು, ಅದರಂತೆ ಸಾರಿಗೇತರ ಹೊಸ ವಾಹನಗಳ ನೊಂದಣಿಗಳ ಹಾಗೂ ಹೊಸ ಚಾಲನಾ ಪತ್ರಗಳ ನೀಡಿಕೆಗೆ ಸಂಬಂಧಿಸಿರುವಂತೆ ಸ್ಮಾರ್ಟ್ ಕಾರ್ಡ್‌ಗಳನ್ನು ವಿತರಿಸುವ ವ್ಯವಸ್ಥೆ ಮಾಡಲಾಗಿರುತ್ತದೆ. ಇದರ ಜೊತೆಗೆ ಕಛೇರಿಗೆ ಸಂಬಂಧಿಸಿದಂತೆ ಎಲ್ಲಾ ದಾಖಲೆಗಳನ್ನು ಸಂರಕ್ಷಿಸಿಡಲು ಅನುಕೂಲವಾಗುವಂತೆ ವಿವರಗಳನ್ನು ಅಂತರ್ಜಾಲದಲ್ಲಿ ಅಳವಡಿಸುವ ಕೆಲಸ ಕಾರ್ಯಗಳು ಭರದಿಂದ ಸಾಗಿರುತ್ತದೆ.